**All India Radio: Bangalore**
**National Bulletin In Kannada**
**16.12.2024  1.10 p.m**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**16.12.2024  1.10 p.m**

**<><><><>**

ಮುಖ್ಯಾಂಶಗಳು

೧.ರಾಜ್ಯಸಭೆಯಲ್ಲಿ ಸಂವಿಧಾನ ಕುರಿತ ವಿಶೇಷ ಚರ್ಚೆ ಆರಂಭ

೨.ದೇಶಾದ್ಯಂತ ೧೯೭೧ರ ಪಾಕಿಸ್ತಾನ್-ಭಾರತ ಯುದ್ಧದ ವಿಜಯ್ ದಿವಸ್ ಆಚರಣೆ ; ಗಣ್ಯರಿಂದ ಯೋಧರಿಗೆ ಶ್ರದ್ಧಾಂಜಲಿ

೩.ಖ್ಯಾತ್ ತಬಲಾ ವಾದಕ ಪದ್ಮವಿಭೂಷಣ ಜಾಕೀರ್ ಹುಸೇನ್ ನಿಧನ ; ರಾಷ್ಟ್ರಪತಿ, ಪ್ರಧಾನಿ ಸಂತಾಪ

೪.ಪ್ರಧಾನಿ ಹಾಗೂ ಶ್ರೀಲಂಕಾ ಅಧ್ಯಕ್ಷರ ನಡುವಿನ ದ್ವಿಪಕ್ಷೀಯ ಮಾತುಕತೆ ಪ್ರಗತಿಯಲ್ಲಿ

೫.ಬಾರ್ಡರ್ ಗವಾಸ್ಕರ್ ಟ್ರೋಫಿ ಟೆಸ್ಟ್ ಕ್ರಿಕೆಟ್ ; ಮೊದಲ ಇನ್ನಿಂಗ್ಸ್‌ನಲ್ಲಿ ಭಾರತ ಬ್ಯಾಟಿಂಗ್ ಮುಂದುವರಿಕೆ

**<><><><>**

ಸಂವಿಧಾನ ಅಂಗೀಕಾರಗೊಂಡು ೭೫ನೇ ವರ್ಷದ ಅಂಗವಾಗಿ ಇಂದು ರಾಜ್ಯಸಭೆಯಲ್ಲಿ ಎರಡು ದಿನಗಳ ವಿಶೇಷ ಚರ್ಚೆ ಆರಂಭವಾಗಿದೆ. ಶುಕ್ರವಾರ ಮತ್ತು ಶನಿವಾರ ಲೋಕಸಭೆಯಲ್ಲಿ ಇದೇ ರೀತಿಯ ಚರ್ಚೆ ನಡೆಯಿತು. ನಾಳೆ ರಾಜ್ಯಸಭೆಯಲ್ಲಿ ನಡೆಯುವ ಚರ್ಚೆಗೆ ಪ್ರಧಾನಿ ನರೇಂದ್ರ ಮೋದಿ ಉತ್ತರ ನೀಡುವ ನಿರೀಕ್ಷೆ ಇದೆ. ಚರ್ಚೆಯನ್ನು ಆರಂಭಿಸಿದ ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಸಂವಿಧಾನ ಸಭೆಯ ಸದಸ್ಯರು ವಿಶೇಷವಾಗಿ ೧೫ ಮಹಿಳಾ ಸದಸ್ಯರನ್ನು ಸ್ಮರಿಸಿ ಗೌರವ ಸೂಚಿಸಿದರು. ಸಂವಿಧಾನದಲ್ಲಿ ಅಡಕವಾಗಿರುವ ಮೌಲ್ಯಗಳನ್ನು ಎತ್ತಿ ಹಿಡಿಯುವ ಭಾರತವನ್ನು ನಿರ್ಮಿಸುವ ಬದ್ಧತೆಯನ್ನು ಪುನರುಚ್ಛರಿಸುವ ಸಮಯ ಇದಾಗಿದೆ ಎಂದರು.

ಧ್ವನಿ : ನಿರ್ಮಲಾ ಸೀತಾರಾಮನ್

ಇದಕ್ಕೂ ಮೊದಲು ನೂತನವಾಗಿ ಆಯ್ಕೆಯಾಗಿರುವ ಸದಸ್ಯರಾದ ಬಿಜೆಪಿಯ ರ‍್ಯಾಗಾ ಕೃಷ್ಣಯ್ಯ, ರೇಖಾ ಶರ್ಮ ಮತ್ತು ಸುಜೀತ್ ಕುಮಾರ್, ಟಿಡಿಪಿಯ ಮಸ್ತಾನ್ ರಾವ್ ಯಾದವ್ ಬೀಡಾ ಸನ ಸತೀಶ್ ಬಾಬು, ಹಾಗೂ ಟಿಎಂಸಿಯ ರಿತಬ್ರತ ಬ್ಯಾಜರ್ಜಿ ಪ್ರಮಾಣವಚನ ಸ್ವೀಕರಿಸಿದರು. ಬಿಜೆಪಿ ತನ್ನ ಎಲ್ಲಾ ರಾಜ್ಯಸಭಾ ಸಂಸದರಿಗೆ 'ಮೂರು ಸಾಲಿನ ವಿಪ್' ಜಾರಿ ಮಾಡಿದ್ದು, ಭಾರತದ ಸಂವಿಧಾನದ ಮೇಲಿನ ಚರ್ಚೆಯ ಸಂದರ್ಭದಲ್ಲಿ ಇಂದು ಮತ್ತು ನಾಳೆ ಮೇಲ್ಮನೆಯಲ್ಲಿ ಹಾಜರಿರಬೇಕು ಎಂದು ಒತ್ತಾಯಿಸಿದೆ. ನವೆಂಬರ್

೨೬, ೧೯೪೯ ರಂದು, ಭಾರತೀಯ ಸಂವಿಧಾನ ಸಭೆಯು ಔಪಚಾರಿಕವಾಗಿ ಸಂವಿಧಾನವನ್ನು ಅಂಗೀಕರಿಸಿತು, ಇದು ಜನವರಿ ೨೬, ೧೯೫೦ ರಂದು ಜಾರಿಗೆ ಬಂದು, ಭಾರತವನ್ನು ಸಾರ್ವಭೌಮ, ಪ್ರಜಾಪ್ರಭುತ್ವ ಗಣರಾಜ್ಯವಾಗಿ ಸ್ಥಾಪಿಸಿತು. ೨೦೧೫ ರಲ್ಲಿ, ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಸರ್ಕಾರ ೧೯೪೯ ರಲ್ಲಿ ಭಾರತೀಯ ಸಂವಿಧಾನವನ್ನು ಅಂಗೀಕರಿಸಿದ ಗೌರವಾರ್ಥವಾಗಿ ನವೆಂಬರ್ ೨೬ ಅನ್ನು ಸಂವಿಧಾನ ದಿನ ಎಂದು ಔಪಚಾರಿಕವಾಗಿ ಘೋಷಿಸಿತು.

<><><><>

೧೯೭೧ ರ ಯುದ್ಧದಲ್ಲಿ ಪಾಕಿಸ್ತಾನದ ವಿರುದ್ಧ ಭಾರತ ಗಳಿಸಿದ ವಿಜಯದ ಸ್ಮರಣಾರ್ಥ ರಾಷ್ಟ್ರ ಇಂದು ವಿಜಯ್ ದಿವಸ್ ಅನ್ನು ಆಚರಿಸುತ್ತಿದ್ದು, ಯುದ್ಧದಲ್ಲಿ ಹುತಾತ್ಮರಾದ ಯೋಧರಿಗೆ ಶ್ರದ್ಧಾಂಜಲಿ ಸಲ್ಲಿಸಲಾಗುತ್ತಿದೆ. ವಿಜಯ್ ದಿವಸ್ ಸಂದರ್ಭದಲ್ಲಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಭಾರತದ ಸಶಸ್ತ್ರ ಪಡೆಗಳ ಶೌರ್ಯ ಮತ್ತು ತ್ಯಾಗಕ್ಕೆ ಗೌರವವಂದನೆ ಸಲ್ಲಿಸಿದ್ದಾರೆ. ಸಶಸ್ತ್ರ ಪಡೆಗಳ ಅಚಲ ಧೈರ್ಯ ಮತ್ತು ದೇಶಭಕ್ತಿಯು ರಾಷ್ಟ್ರ ಸುರಕ್ಷಿತವಾಗಿರುವುದನ್ನು ಖಚಿತಪಡಿಸಿದೆ. ಅವರ ತ್ಯಾಗ ಮತ್ತು ಸೇವೆಯನ್ನು ದೇಶ ಎಂದಿಗೂ ಮರೆಯುವುದಿಲ್ಲ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ರಾಜನಾಥ್ ಸಿಂಗ್ ಹೇಳಿದ್ದಾರೆ. ೧೯೭೧ ರ ಇದೇ ದಿನ, ಪಾಕಿಸ್ತಾನಿ ಪಡೆಗಳ ಮುಖ್ಯಸ್ಥ ಜನರಲ್ ಎ.ಎ.ಖಾನ್ ನಿಯಾಜಿ, ೯೩ ಸಾವಿರ ಸೈನಿಕರೊಂದಿಗೆ, ಭಾರತೀಯ ಸೇನೆ ಮತ್ತು ಮುಕ್ತಿ ಬಹಿನಿಯನ್ನು ಒಳಗೊಂಡಿರುವ ಮಿತ್ರ ಪಡೆಗಳಿಗೆ ಬೇಷರತ್ತಾಗಿ ಶರಣಾದರು. ಈ ಯುದ್ಧದ ಅಂತ್ಯವು ಪೂರ್ವ ಪಾಕಿಸ್ತಾನವನ್ನು ಬಾಂಗ್ಲಾದೇಶವಾಗಿ ಪ್ರತ್ಯೇಕಗೊಳ್ಳಲು ಕಾರಣವಾಯಿತು. ರಾಷ್ಟ್ರಪತಿ ದ್ರೌಪದಿ ಮುರ್ಮು, ವಿಜಯ್ ದಿವಸವಾದ ಇಂದು ವೀರ ಯೋಧರನ್ನು ಸ್ಮರಿಸಿದ್ದು, ಅವರ ಶೌರ್ಯ, ತ್ಯಾಗ ಹಾಗೂ ಯಾಶಸ್ಸಿನಗಾಥೆ ದೇಶದ ಜನತೆಗೆ ಎಂದಿಗೂ ಸ್ಫೂರ್ತಿದಾಯಕ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ೧೯೭೧ರ ಯುದ್ಧದಲ್ಲಿ ಭಾರತದ ಐತಿಹಾಸಿಕ ಗೆಲುವಿಗೆ ಕೊಡುಗೆ ನೀಡಿದ ವೀರಯೋಧರ ಸಾಹಸ ಮತ್ತು ತ್ಯಾಗಬಲಿದಾನವನ್ನು ಇಂದು ದೇಶ ಸ್ಮರಿಸುತ್ತಿದೆ ಎಂದು ಪ್ರಧಾನಿ ನರೇಂದ್ರ ಮೋದಿ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಅವರು, ಯೋಧರ ನಿಸ್ವಾರ್ಥ ಸಮರ್ಪಣೆ ಮತ್ತು ಅಚಲ ಬದ್ಧತೆ ದೇಶವು ರಕ್ಷಿಸಿ ರಾಷ್ಟ್ರಕ್ಕೆ ಕೀರ್ತಿ ತಂದಿದೆ ಎಂದಿದ್ದಾರೆ.

<><><><>

ತಬಲಾ ವಾದ್ಯವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ದಿದಲ್ಲದೇ ಸಂಗೀತ ಕ್ಷೇತ್ರಕ್ಕೆ ತಮ್ಮ ಇಡೀ ಜೀವನವನ್ನು ಮುಡಿಪಾಗಿಟ್ಟಿದ್ದ ವಿಶ್ವವಿಖ್ಯಾತ ತಬಲಾ ವಾದಕ ಪದ್ಮವಿಭೂಷಣ ಉಸ್ತಾದ್ ಜಾಕೀರ್ ಹುಸೇನ್ ಅಮೆರಿಕದಲ್ಲಿ ನಿಧನರಾಗಿರುವ ಕುರಿತು ಅವರ ಕುಟುಂಬದ ಮೂಲಗಳು ದೃಢಪಡಿಸಿವೆ. ಅವರಿಗೆ ೭೩ ವರ್ಷ ವಯಸ್ಸಾಗಿತ್ತು. ತೀವ್ರ ರಕ್ತದೊತ್ತಡ ಹಾಗೂ ಶ್ವಾಸಕೋಶದ ಸಮಸ್ಯೆಯಿಂದ ಬಳಲುತ್ತಿದ್ದ ಅವರನ್ನು ಸ್ಯಾನ್ ಫ್ರಾನ್ಸಿಸ್ಕೋದ ಆಸ್ಪತ್ರೆಯೊಂದಕ್ಕೆ ದಾಖಲಿಸಲಾಗಿತ್ತು. ಅವರು, ಪತ್ನಿ

ಹಾಗೂ ಇಬ್ಬರು ಪುತ್ರಿಯರನ್ನು ಅಗಲಿದ್ದಾರೆ. ಈ ಕುರಿತಂತೆ ನಮ್ಮ ಸಂಪಾದಕರಾದ ಚೇತನ್ ಸಿ.ವಿ. ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

ಧ್ವನಿ : ಚೇತನ್ ಸಿ.ವಿ.

ಜಾಕೀರ್ ಹುಸೇನ್ ಅವರ ನಿಧನಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಮಂತ್ರಿ ನರೇಂದ್ರ ಮೋದಿ ಸಂತಾಪ ಸೂಚಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ರಾಷ್ಟ್ರಪತಿ, ಜಾಕೀರ್ ಹುಸೇನ್ ಅವರ ನಿಧನ ಸಂಗೀತ ಕ್ಷೇತ್ರಕ್ಕೆ ತುಂಬಲಾರದ ನಷ್ಟವಾಗಿದೆ ಎಂದಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಸಂದೇಶ ಹಂಚಿಕೊಂಡಿರುವ ಪ್ರಧಾನಿ ನರೇಂದ್ರ ಮೋದಿ, ಜಾಕೀರ್ ಹುಸೇನ್, ಭಾರತೀಯ ಶಾಸ್ತ್ರೀಯ ಸಂಗೀತ ಕ್ಷೇತ್ರದಲ್ಲಿ ಕ್ರಾಂತಿಯನ್ನುಂಟುಮಾಡಿದ ಕಲಾವಿದರು ಎಂದು ಸ್ಮರಿಸಲ್ಪಡುತ್ತಾರೆ. ತಮ್ಮ ಅಪ್ರತಿಮ ವಾದನದೊಂದಿಗೆ ಅವರು, ಲಕ್ಷಾಂತರ ಜನರನ್ನು ಆಕರ್ಷಿಸಿ ತಬಲಾವನ್ನು ಅಂತಾರಾಷ್ಟ್ರೀಯ ಮಟ್ಟಕ್ಕೆ ಕೊಂಡೊಯ್ದರು ಎಂದಿದ್ದಾರೆ.

<><><><>

ನವದೆಹಲಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಶ್ರೀಲಂಕಾ ಅಧ್ಯಕ್ಷ ಅನುರಕುಮಾರ್ ದಿಸ್ಸಾ ನಾಯಕೆಯವರ ದ್ವಿಪಕ್ಷೀಯ ಮಾತುಕತೆ ಪ್ರಗತಿಯಲ್ಲಿದೆ. ಈ ವೇಳೆ ಅವರು ಪರಸ್ಪರ ಹಿತಾಸಕ್ತಿಯ ವಿಷಯಗಳ ಕುರಿತು ಮಾತನಾಡುವ ನಿರೀಕ್ಷೆಯಿದೆ. ಇಂದು ಬೆಳಗ್ಗೆ ರಾಜಭವನದ ಆವರಣದಲ್ಲಿ ಶ್ರೀಲಂಕಾ ಅಧ್ಯಕ್ಷರಿಗೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಪ್ರಧಾನಿ ನರೇಂದ್ರ ಮೋದಿ, ಔಪಚಾರಿಕ ಸ್ವಾಗತ ಕೋರಿದರು. ಬಳಿಕ ಅವರು, ರಾಜ್‌ಘಾಟ್‌ನಲ್ಲಿ ರಾಷ್ಟ್ರಪಿತ ಮಹಾತ್ಮಾಗಾಂಧೀಜಿಯವರಿಗೆ ಪುಷ್ಪನಮನ ಸಲ್ಲಿಸಿದರು. ಮೂರು ದಿನಗಳ ಭಾರತ ಪ್ರವಾಸದಲ್ಲಿರುವ ಶ್ರೀಲಂಕಾ ಅಧ್ಯಕ್ಷರು ನಿನ್ನೆ ನವದೆಹಲಿಗೆ ಆಗಮಿಸಿದರು. ಅವರನ್ನು ಮಾಹಿತಿ ಮತ್ತು ಪಸ್ರಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ಬರಮಾಡಿಕೊಂಡರು. ಅನುರಕುಮಾರ ದಿಸ್ಸಾನಾಯಕೆ ಅವರು, ಇಂದು ಸಂಜೆ ರಾಷ್ಟ್ರಪತಿ ದ್ರೌಪದಿ ಮುರ್ಮು ಹಾಗೂ ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರನ್ನು ಭೇಟಿ ಮಾಡಲಿದ್ದಾರೆ. ಬಳಿಕ ಅವರು, ಬಿಹಾರದ ಬೋಧ್‌ಗಯಾಕ್ಕೆ ತೆರಳಲಿದ್ದಾರೆ. ಅಧ್ಯಕ್ಷರಾಗಿ ಆಯ್ಕೆಯಾದ ನಂತರ ದಿಸ್ಸಾನಾಯಕೆ ಅವರು, ಮೊದಲ ಭಾರತ ಭೇಟಿ ಇದಾಗಿದೆ.

<><><><>

ಛತ್ತೀಸ್‌ಗಢ ಪ್ರವಾಸದಲ್ಲಿರುವ ಕೇಂದ್ರ ಗೃಹ ಸಚಿವ ಅಮಿತ್ ಶಾ, ನಿನ್ನೆ ಸಂಜೆ ಬಸ್ತಾರ್‌ನ ಜಗದಲ್‌ಪುರದಲ್ಲಿ ಶರಣಾದ ಮಾವೋವಾದಿಗಳು ಮತ್ತು ಅವರ ಕುಟುಂಬಗಳೊಂದಿಗೆ ಸಂವಾದ ನಡೆಸಿದರು. ಶರಣಾದ ಮಾವೋವಾದಿಗಳು ಹಾಗೂ ನಕ್ಸಲ್ ಹಿಂಸಾಚಾರದಿಂದ ಸಂತ್ರಸ್ತರಾಗಿರುವ ಜನರ ಕಲ್ಯಾಣಕ್ಕಾಗಿ ಸರ್ಕಾರ ಸಮಗ್ರ ಯೋಜನೆಯನ್ನು ರೂಪಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವರು ಹೇಳಿದರು.

ಧ್ವನಿ : ಅಮಿತ್ ಶಾ

<><><><>

ಬ್ರಿಸ್ಬೇನ್‌ನ ಗಾಬಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಭಾರತ ಮತ್ತು ಆಸ್ಟ್ರೇಲಿಯಾ ನಡುವಿನ ಬಾರ್ಡರ್ ಗವಾಸ್ಕರ್ ಟ್ರೋಫಿಯ ಮೂರನೇ ಟೆಸ್ಟ್ ಪಂದ್ಯದ ೩ನೇ ದಿನವಾದ ಇಂದು ಅತಿಥೇಯಾ ಆಸ್ಟ್ರೇಲಿಯಾ ೨ನೇ ದಿನದಾಟವನ್ನು ಮುಂದುವರೆಸಿ ತನ್ನ ಮೊದಲ ಇನ್ನಿಂಗ್ಸ್‌ನಲ್ಲಿ ಭಾರತದ ವಿರುದ್ಧ ತನ್ನೆಲ್ಲ ವಿಕೆಟ್ ಕಳೆದುಕೊಂಡು ೪೪೫ ರನ್ ಗಳಿಸಿತು. ಟಾಸ್‌ಗೆದ್ದು, ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದ್ದ ಭಾರತದ ಪರ ಜಸ್ಪ್ರೀತ್ ಬುಮ್ರಾ ೬ ವಿಕೆಟ್ ಪಡೆದರು. ತನ್ನ ಮೊದಲನೇ ಇನ್ನಿಂಗ್ಸ್‌ನಲ್ಲಿ ಭಾರತ ದಿನದಾಟದ ಅಂತ್ಯಕ್ಕೆ ೪ ವಿಕೆಟ್ ನಷ್ಟಕ್ಕೆ ೫೧ ರನ್ ಗಳಿಸಿದೆ. ಹಾಗೂ ಆಸ್ಟ್ರೇಲಿಯಾಗಿಂತ ೩೯೪ ರನ್ ಹಿನ್ನಡೆಯಲ್ಲಿದೆ. ಅಡಿಲೇಡ್ ಓವಲ್‌ನಲ್ಲಿ ನಡೆದ ಎರಡನೇ ಟೆಸ್ಟ್‌ನಲ್ಲಿ ಆಸ್ಟ್ರೇಲಿಯಾ ಗೆದ್ದ ನಂತರ ಐದು ಪಂದ್ಯಗಳ ಸರಣಿಯು ಪ್ರಸ್ತುತ ೧-೧ ಸಮಬಲದಲ್ಲಿದೆ.

<><><><>

ವಿದ್ಯುನ್ಮಾನ ಮತಯಂತ್ರ ಕುರಿತ ಆರೋಪಗಳಿಗೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಕಾಂಗ್ರೆಸ್ ಪಕ್ಷದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸಂಸತ್ತಿನ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೆಲವು ವಿರೋಧ ಪಕ್ಷಗಳು ಕಾಂಗ್ರೆಸ್‌ನ ಇವಿಎಂ ಕುರಿತ ಬದಲಾಗುತ್ತಿರುವ ನಿಲುವಿನ ಬಗ್ಗೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ. ಕಾಂಗ್ರೆಸ್ ಪಕ್ಷ ತನ್ನ ತಪ್ಪಿನ ಅರಿವು ಮಾಡಿಕೊಳ್ಳುವ ಅಗತ್ಯವಿದೆ ಎಂದಿದ್ದಾರೆ. ಇದಕ್ಕೂ ಮೊದಲು ಜಮ್ಮು ಕಾಶ್ಮೀರ ಮುಖ್ಯಮಂತ್ರಿ ಒಮರ್ ಅಬ್ದುಲ್ಲಾ, ಒಂದೆಡೆ ಇವಿಎಂಗಳ ಮೂಲಕ ನೂರು ಸ್ಥಾನಗಳನ್ನು ಗೆದ್ದು, ಜಯದ ಸಂಭ್ರಮಾಚರಣೆ ಆಚರಿಸಿ, ಇನ್ನೊಂದೆಡೆ ನಿರೀಕ್ಷಿತ ಫಲಿತಾಂಶ ದೊರೆಯದ ಕಡೆ ಇವಿಎಂಗಳ ಕುರಿತಂತೆ ದೂರುವುದು ಸರಿಯಲ್ಲ ಎಂದಿದ್ದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>

<><>ನಮ್ಮ ಮುಂದಿನ ವಾರ್ತಾ ಪ್ರಸಾರ ೨.೩೦ ಕ್ಕೆ <><>